# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಅವುಗಳ ವ್ಯಾಪ್ತಿಯ ಜಲಾನಯನ, ಸಾಮಾಜಿಕ ಅರಣ್ಯ, ಯುವಜನ ಸೇವಾ ಮತ್ತು ಕ್ರೀಡಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ/ಹೊರಗುತ್ತಿಗೆ ಸಿಬ್ಬಂದಿಯವರ ವೇತನ/ಸಂಭಾವನೆಗಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಶಿಕ್ಷಣ, ಪಶು ಸಂಗೋಪನೆ, ಸಮಾಜ ಕಲ್ಯಾಣ ಹಾಗೂ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಕೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ/ಹೊರಗುತ್ತಿಗೆ ಸಿಬ್ಬಂದಿಯವರುಗಳ ವೇತನ/ಸಂಭಾವನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2402, 2406, 2205, 2235 ಮತ್ತು 2515ರಡಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ41.95ಲಕ್ಷ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ರೂ.212.0ಲಕ್ಷ ಒಟ್ಟು ರೂ.253.95ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ41.95ಲಕ್ಷಗಳನ್ನು ಶೀರ್ಷಿಕೆ 2515-00-196-1-05-300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ212.00ಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 8 ವೆಚ್ಚ 6/2021(ಇ) ದಿನಾಂಕ: 11ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ253.953ಲಕ್ಷ (ರೂಪಾಯಿ ಎರಡು ನೂರ ಐವತ್ಮೂರು ಲಕ್ಷದ ತೊಂಬತ್ತೈದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ/ಕೃಷಿ/ಅರಣ್ಯ/ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ/ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ

## ಸರ್ಕಾರದ ಆದೇಶ ಸಂಖ್ಯೆ: ಆಇ 8 ವೆಚ್ಚ 6/2021 ದಿನಾಂಕ:11.1.2021ಕ್ಕೆ ಅನುಬಂಧ

| ಕ್ರ.ಸಂ. | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| 1 | ಗದಗ್ | 2402-00-104-0-27-005 | 11.68 | 1415621695 12.1.21 | 11.68 |
| 2 | ಉಡುಪಿ | 2406-00-101-0-26-005 | 8.19 | | 8.19 |
| 3 | ಮಂಡ್ಯ | 2205-00-104-0-27-005 | 5.87 | | 5.87 |
| 4 | ಬೀದರ್ | 2235-00-101-0-27-005 | 16.21 | | 16.21 |
| 5 | ಧಾರವಾಡ | 2515-00-102-0-61-005 | | 40.99 | 40.99 |
| 5 | ಸೋಮವಾರಪೇಟೆ | 2515-00-102-0-61-090 | 1415621764 12.1.21 | 11.97 | 11.97 |
| 6 | ಮಡಿಕೇರಿ | 2515-00-102-0-61-090 | | 19.01 | 19.01 |
| 7 | ವಿರಾಜಪೇಟೆ | 2515-00-102-0-61-090 | | 19.32 | 19.32 |
| 8 | ಚಿಕ್ಕನಾಯಕನಹಳ್ಳಿ | 2515-00-102-0-61-005 | | 33.50 | 33.50 |
| 9 | ದೊಡ್ಡಬಳ್ಳಾಪುರ | 2515-00-102-0-61-005<br>2515-00-102-0-61-090 | | 45.60<br>10.00 | 55.60 |
| 10 | ಚಿಂಚೋಳಿ | 2515-00-102-0-61-090 | | 31.61 | 31.61 |
| | **ಒಟ್ಟು** | | **41.95** | **212.00** | **253.95** |

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಾಮರಾಜನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಸರ್ಕಾರಿ ಕಟ್ಟಡಗಳ ತುರ್ತು ಸಣ್ಣ ಕಾಮಗಾರಿಗಳಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಪ್ರಸ್ತಾವನೆ

**ಪ್ರಸ್ತಾವನೆ:**

ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು ವ್ಯಾಪ್ತಿಯ ಸರ್ಕಾರಿ ಶಾಲಾ ಕಟ್ಟಡ/ಇತರೆ ಸರ್ಕಾರಿ ಕಟ್ಟಡಗಳು ಬಹಳ ಶಿಥಿಲಗೊಂಡಿದ್ದು ಇವುಗಳನ್ನು ತುರ್ತು ದುರಸ್ಥಿಗೊಳಿಸದಿದ್ದಲ್ಲಿ ಅವಘಡ ಸಂಭವಿಸುವ ಸಾಧ್ಯತೆ ಇರುವುದರಿಂದ ತುರ್ತಾಗಿ ದುರಸ್ಥಿ/ನಿರ್ವಹಣೆಗಾಗಿ ಒಟ್ಟು ರೂ.29.50ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಲೆಕ್ಕ ಶೀರ್ಷಿಕೆ 2059-00-101-0-28-200 ಕಾರ್ಯಕ್ರಮದಡಿ ಬಿಡುಗಡೆಗೊಳಿಸಲು ನಿರ್ಣಯಿಸಿದೆ.

ಮೇಲ್ಕಂಡ ತುರ್ತು ವೆಚ್ಚಗಳಿಗಾಗಿ ಒಟ್ಟು ರೂ.29.50ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2059-80-196-1-01-300ರಡಿ ಲಭ್ಯವಿರುವ ಅನುದಾನದಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 8 ವೆಚ್ಚ 6/2021(ಇ) ದಿನಾಂಕ:11ನೇ ಜನವರಿ 2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕೆಳಕಂಡ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3ರ ಕಾರ್ಯಕ್ರಮಗಳಡಿ ನಿರ್ವಹಣೆಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಒಟ್ಟು ರೂ.29.50ಲಕ್ಷ (ರೂಪಾಯಿ ಇಪ್ಪತ್ತೊಂಬತ್ತು ಲಕ್ಷದ ಐವತ್ತು ಸಾವಿರಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಹಾಗೂ ಲಗತ್ತಿಸಿರುವ ಪಟ್ಟಿಗಳಲ್ಲಿ ಪ್ರಸ್ತಾವಿಸಿರುವ ಕಾಮಗಾರಿಗಳಿಗೆ ಮಾತ್ರ ಬಳಸತಕ್ಕದ್ದು.

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | 2059-80-196-1-01-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಚಾಮರಾಜನಗರ | 2059-00-101-0-28-200 | 29.50 |
| | **ಒಟ್ಟು** | | **29.50** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

1415621824
12.1.21

**(ಪುರುಷೋತ್ತಮ್ ಸಿಂಗ್ ಬಿ.ಹೆಚ್.)**
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-9
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,/ಮುಖ್ಯ ಲೆಕ್ಕಾಧಿಕಾರಿಗಳು
5. ಅಪರ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ಜಿಲ್ಲಾ ಖಜಾನೆ ಅಧಿಕಾರಿಗಳು
7. ರಕ್ಷಾ ಕಡತಕ್ಕೆ 8.ಹೆಚ್ಚುವರಿ ಪ್ರತಿ